ಉ) ಇಲಾಖೆಯಲ್ಲಿ ಖಾಲಿರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು 2008ನೇ ಸಾಲಿನಲ್ಲಿ 815 ವೈದ್ಯರ ಹುದ್ದೆಗಳನ್ನು ಲೋಕಸೇವಾ ಆಯೋಗದಿಂದ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಖಾಲಿ ಇರುವ ವೈದ್ಯರುಗಳನ್ನು ಗುತ್ತಿಗೆ ಆದಾರದ ಮೇಲೆ ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಇಲಾಖೆಯಲ್ಲಿ ಖಾಲಿ ಇರುವ ಅರೆ ವೈದ್ಯಕೀಯ ಸಿಬ್ಬಂದಿಯನ್ನು ಭರ್ತಿ ಮಾಡುವ ಸಲುವಾಗಿ ಅರ್ಥಿಕ ಇಲಾಖೆಯ ಸಹಮತಿ ಕೋರಲಾಗಿ ಪ್ರಸಕ್ತ ಸಾಲಿನಲ್ಲಿ 3228 ಹುದ್ದೆಗಳನ್ನು ಹಾಗೂ 1000 ಹುದ್ದೆಗಳನ್ನು ಒಟ್ಟು 4228 ಹುದ್ದೆಗಳನ್ನು ತುಂಬಲು ಮತ್ತು ಮುಂದಿನ ವರ್ಷ 1017 ಹುದ್ದೆಗಳನ್ನು ತುಂಬಲು ಅನುಮತಿ ನೀಡಿದೆ. ಈ ಬಗ್ಗೆ ವಿಶೇಷ ನಿಯಮಗಳನ್ನು ರೂಪಿಸಿ ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ.

69 ಶ್ರೀ. ಕುಮಾರಸ್ವಾಮಿ ಹೆಚ್.ಕೆ.(ಸಕಲೇಶಪುರ) :– ಮಾನ್ಯ ಆರೋಗ್ಯ ಮತ್ತು ಕುಟುಂಬಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದ ಆಸ್ಪತ್ರೆಗಳಲ್ಲಿ ವೈದ್ಯರ ಮತ್ತು ಇತರೆ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಪದವಿ ವೈದ್ಯರು, ಸ್ನಾತಕೋತರ ವೈದ್ಯರು, ಶುಶ್ರೂಷಕರು 4ನೇ ದರ್ಜೆ ನೌಕರರ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಮೇಲ್ದರ್ಜೆಗೇರಿಸಿರುವ ಆಸ್ಪತ್ರೆಗಳಲ್ಲಿ ಸಿಬ್ಬಂದಿಯನ್ನು ಯಾವಾಗ ಮಂಜೂರಾತಿ ನೀಡಿ, ನೇಮಕ ಮಾಡಲಾಗುವುದು.

(ಈ) ಖಾಲಿ ಇರುವ ಹುದ್ದೆಗಳನ್ನು ಯಾವಾಗ ತುಂಬಲಾಗುವುದು.;

ಉ) ಪದವಿ ವೈದ್ಯರ ವೇತನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ?

ಶ್ರೀ ಬಿ.ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):–

(ಅ) ಬಂದಿದೆ.

(ಆ) ರಾಜ್ಯದ ಪದವಿ ವೈದ್ಯರು : 204, ಸ್ನಾತಕೋತರ ವೈದ್ಯರು : 1102 ಶುಶ್ರೂಷಕರು: 3327, 4ನೇ ದರ್ಜೆ ನೌಕರರು 1580 ಹುದ್ದೆಗಳು ಖಾಲಿ ಇರುತ್ತವೆ.

(ಇ) ಈಗಾಗಲೇ ಮೇಲ್ದರ್ಜೆಗೇರಿಸಿದ ಆಸ್ಪತ್ರೆಗಳಿಗೆ ಹೆಚ್ಚುವರಿಯಾಗಿ ಸಿಬ್ಬಂದಿಯನ್ನು ಮಂಜೂರಾತಿ ಮಾಡಲಾಗಿದೆ. ಮೇಲ್ದರ್ಜೆಗೇರಿಸಿರುವ ಆಸ್ಪತ್ರೆಗಳು ಶೇ. 60ರಷ್ಟು ಕಟ್ಟಡ ಪೂರ್ಣಗೊಂಡ ನಂತರ ಸಿಬ್ಬಂದಿಯನ್ನು ಭರ್ತಿ ಮಾಡಲು ಅರ್ಹತೆ ಪಡೆಯುತ್ತದೆ.

(ಈ) ಇಲಾಖೆಯಲ್ಲಿ ಖಾಲಿಯಿರುವ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಭರ್ತಿ ಮಾಡಲು 2008ನೇ ಸಾಲಿನಲ್ಲಿ 815 ವೈದ್ಯರ ಹುದ್ದೆಗಳನ್ನು ಲೋಕಸೇವಾ ಆಯೋಗದಿಂದ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಖಾಲಿಇರುವ ವೈದ್ಯರುಗಳನ್ನು ಗುತ್ತಿಗೆ ಆದಾರದ ಮೇಲೆ ನೇಮಕ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಇಲಾಖೆಯಲ್ಲಿ ಖಾಲಿ ಇರುವ ಅರೆ ವೈದ್ಯಕೀಯ ಸಿಬ್ಬಂದಿಯನ್ನು ಭರ್ತಿ ಮಾಡುವ ಸಲುವಾಗಿ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿ ಪ್ರಸಕ್ತ ಸಾಲಿನಲ್ಲಿ 3228 ಹುದ್ದೆಗಳು ಹಾಗೂ 1000 ಹುದ್ದೆಗಳನ್ನು ಒಟ್ಟು 4228 ಹುದ್ದೆಗಳನ್ನು ತುಂಬಲು ಮತ್ತು ಮುಂದಿನ ವರ್ಷ 1017 ಹುದ್ದೆಗಳನ್ನು ತುಂಬಲು ಅನುಮತಿ ನೀಡಿದೆ. ಈ ಬಗ್ಗೆ ವಿಶೇಷ ನಿಯಮಗಳನ್ನು ರೂಪಿಸಿ ಸದರಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ

ಊ) ಇಲ್ಲ.

221 ಶ್ರೀ ಮಂಜುನಾಥ್ ಹೆಚ್.ಪಿ (ಹುಣಸೂರು) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕಿನ ದಿ: ಶ್ರೀ ಡಿ. ದೇವರಾಜ ಅರಸು ಸಾರ್ವಜನಿಕ ಆಸ್ಪತ್ರೆಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಅವುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಮತ್ತು ಯಾವ ದಿನಾಂಕದಿಂದ ಖಾಲಿ ಇರುತ್ತದೆ;

(ಇ) ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;